# ಕರ್ನಾಟಕ ಸರ್ಕಾರ

ಸಂಖ್ಯೆ: MWD 282 MDS 2018

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:18-08-2018.

## ಸೇರ್ಪಡೆ ಆದೇಶ

ಸರ್ಕಾರದ ಆದೇಶ ಸಂಖ್ಯೆ: MWD 175 MDS 2016, ದಿನಾಂಕ: 03-01-2017ರ ಆದೇಶದಲ್ಲಿ ಕರ್ನಾಟಕ ರಾಜ್ಯದಲ್ಲಿ ನಡೆಸಲಾಗುತ್ತಿರುವ ಮುಸ್ಲಿಂ ಸಮುದಾಯದ ನೋಂದಾಯಿತ ಮದರಸಾಗಳನ್ನು ಆಧುನೀಕರಣಗೊಳಿಸಲು ಈ ಮದರಾಸಗಳಿಗೆ ಮೂಲಸೌಕರ್ಯವನ್ನು ಕಲ್ಪಿಸಲು ಮತ್ತು ಈ ಮದರಸಾಗಳಲ್ಲಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಔಪಚಾರಿಕ ಹಾಗೂ ಗಣಕೀಕೃತ ಶಿಕ್ಷಣವನ್ನು ನೀಡಲು ಮಂಜೂರಾತಿ ನೀಡಿ ಆದೇಶಿಸಿದೆ.

2018-19ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-214ರಲ್ಲಿ ಮದರಸಾಗಳ ಆಧುನೀಕರಣ, ಔಪಚಾರಿಕ ಶಿಕ್ಷಣ ಒದಗಿಸಲು ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹಂತ ಹಂತವಾಗಿ ರೂ.15.00ಕೋಟಿಗಳ ಸಹಾಯಧನ ನೀಡಲಾಗುವುದೆಂದು ಘೋಷಿಸಲಾಗಿದೆ.

ಮದರಸಾಗಳ ಆಧುನೀಕರಣ, ಔಪಚಾರಿಕ ಶಿಕ್ಷಣ ಒದಗಿಸಲು ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹಂತ ಹಂತವಾಗಿ ರೂ.15.00ಕೋಟಿಗಳ ಸಹಾಯಧನದಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳುವುದು ಎಂದು ಸರ್ಕಾರದ ಆದೇಶ ದಿನಾಂಕ:03-01-2017ರ ಆದೇಶಕ್ಕೆ ಸೇರ್ಪಡೆ ಮಾಡಿಕೊಳ್ಳತಕ್ಕದ್ದು.

1. ಶೌಚಾಲಯ ನಿರ್ಮಾಣ
2. ಮದರಸಾ ಕೊಠಡಿಗಳ ನಿರ್ಮಾಣ
3. ಕುಡಿಯುವ ನೀರಿನ ವ್ಯವಸ್ಥೆ
4. ಮದರಸಾ ರಿಪೇರಿ/ ನವೀಕರಣಗೊಳಿಸಲು
5. ಗ್ರಂಥಾಲಯ, ಕ್ರೀಡಾ ಸಾಮಗ್ರಿಗಳು, ಪೀಠೋಪಕರಣಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2225-03-102-3-10 ಆಬ್ಜೆಕ್ಟ್ ಕೋಡ್ (103)ಗೆ ಒದಗಿಸಿದ ಆಯವ್ಯಯ ರೂ. 40.00ಕೋಟಿಗಳಲ್ಲಿ ರೂ.15.00 ಕೋಟಿಗಳನ್ನು ಮೂಲಭೂತ ಸೌಕರ್ಯ ಅಭಿವೃದ್ಧಿಗೆ ವೆಚ್ಚ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 485 ವೆಚ್ಚ-3/2018 ದಿನಾಂಕ: 02-08-2018 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 28 ಐಎಂಎಂ 2018 ದಿನಾಂಕ:04-05-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**( ಅಕ್ರಂಭಾಷಾ )**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಅಲ್ಪಸಂಖ್ಯಾತರ ಕಲ್ಯಾಣ ಹಜ್**
**ಮತ್ತು ವಕ್ಫ್ ಇಲಾಖೆ,**
18/8/18

ಪ್ರತಿಯನ್ನು:-

1. ಪ್ರಧಾನ ಮಹಾಲೇಖಪಾಲರು(A & E), ಕರ್ನಾಟಕ, ಬೆಂಗಳೂರು.

D/RM/BUDGET/2018/G.O

2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ ಗೋಪುರ, ಬೆಂಗಳೂರು.
6. ನಿರ್ದೇಶಕರು, ಉರ್ದು ಹಾಗೂ ಇತರೆ ಭಾಷಾ ಅಲ್ಪಸಂಖ್ಯಾತರ ನಿರ್ದೇಶನಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
7. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು.
8. ಸಂಬಂಧಪಟ್ಟ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
10. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
11. ಜಂಟಿ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲಾ ಖಜಾನೆ, ಕಂದಾಯ ಭವನ, ಬೆಂಗಳೂರು.
12. ಸಂಬಂಧಪಟ್ಟ ಜಿಲ್ಲೆಯ ಖಜಾನಾಧಿಕಾರಿಗಳು.
13. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು,ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
14. ಶಾಖಾ ರಕ್ಷಾ ಕಡತ.
15. ಹೆಚ್ಚುವರಿ ಪ್ರತಿ.
16. ಲೆಕ್ಕಪತ್ರ ಶಾಖೆ.

D/RM/BUDGET/2018/G.O